# ಕರ್ನಾಟಕ ಸರ್ಕಾರ

ಸಂ:ಗ್ರಾಅಪ/01/ಗ.ಕೋಶ/2016

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು,ದಿನಾಂಕ:23.03.2017

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಬಹುಮಹಡಿಗಳ ಕಟ್ಟಡ
ಬೆಂಗಳೂರು.

**ಇವರಿಗೆ:**

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

**ಮಾನ್ಯರೇ,**

ವಿಷಯ: ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳಿಸಿರುವ ಪಂಚಾಯತ್ 100 – ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಗ್ರಾಅಪ ಇಲಾಖೆಯ ಸೇವೆಗಳು ಮತ್ತು ಕಂದಾಯ ಇಲಾಖೆಯ ಸೇವೆಗಳನ್ನು ಆನ್‌ಲೈನ್ ಮುಖಾಂತರ ಒದಗಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:783:ಗ್ರಾಪಂಅ:2015, ದಿನಾಂಕ:01.01.2016.
2. ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯದ ಪತ್ರ ಸಂಖ್ಯೆ:ಕಂಇ/ ಎಜೆಎಸ್‌ಕೆ/ಆಡಳಿತ–42/15–16.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/01/ಗ.ಕೋಶ/2016, ದಿನಾಂಕ:27.06.2016, 06.07.2016, 21.07.2016 12.08.2016.
4. ಸರ್ಕಾರದ ಪತ್ರ ಸಮ ಸಂಖ್ಯೆ ದಿನಾಂಕ: 06.10.2016.
5. ಸರ್ಕಾರದ ಪತ್ರ ಸಮ ಸಂಖ್ಯೆ ದಿನಾಂಕ: 02.01.2017.

******

ಗ್ರಾಮೀಣ ಜನತೆಯು ತಮ್ಮ ಸಾಮಾಜಿಕ, ಶೈಕ್ಷಣಿಕ, ವಾಣಿಜ್ಯ ಹಾಗೂ ಕೃಷಿ ಚಟುವಟಿಕೆಗಳಿಗಾಗಿ ವಿವಿಧ ಇಲಾಖೆಗಳಿಂದ ಹಲವಾರು ಅಗತ್ಯ ದಾಖಲೆಗಳನ್ನು ತ್ವರಿತವಾಗಿ ಮತ್ತು ಸಮೀಪವಾಗಿ ಪಡೆದುಕೊಳ್ಳಲು ಅನುಕೂಲವಾಗುವಂತೆ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅಧಿಕಾರಗಳನ್ನು ವರ್ಗಾಯಿಸಿ ಆಡಳಿತ ವಿಕೇಂದ್ರೀಕರಣ, ಉತ್ತರದಾಯಿತ್ವ ಮತ್ತು ಶೀಘ್ರತೆಯನ್ನು ತರುವ ನಿಟ್ಟಿನಲ್ಲಿ ವಿವಿಧ ಇಲಾಖೆಗಳ ಸೇವೆಗಳನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ಉಲ್ಲೇಖ(1) ರ ಸುತ್ತೋಲೆ ಮತ್ತು ಉಲ್ಲೇಖ(3) ರಲ್ಲಿನ ಆದೇಶಗಳ ಮೂಲಕ ರಾಜ್ಯದ 4023 ಗ್ರಾಮ ಪಂಚಾಯತಿಗಳಲ್ಲಿ "ಪಂಚಾಯತ್ 100–ಬಾಪೂಜಿ ಸೇವಾ ಕೇಂದ್ರ" ಗಳನ್ನು ಅನುಷ್ಠಾನಗೊಳಿಸಿ ಸರ್ಕಾರದ ಆದೇಶಗಳನ್ನು ಹೊರಡಿಸಿರುವುದು ಸರಿಯಷ್ಟೆ.

ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಒದಗಿಸಲಾಗುತ್ತಿರುವ ಗ್ರಾಅಪ ಇಲಾಖೆ ಹಾಗೂ ಕಂದಾಯ ಇಲಾಖೆಯ ಸೇವೆಗಳ ವರದಿಯನ್ನು ಪರಿಶೀಲಿಸಿದಾಗ:

1) ಗ್ರಾಅಪ ಇಲಾಖೆಯ ಸೇವೆಗಳ ಪ್ರಗತಿಯು ಕುಂಠಿತಗೊಂಡಿರುವುದು ಕಂಡುಬಂದಿರುತ್ತದೆ.

2) ನಾಡ ಕಛೇರಿ ಸೇವೆಗಳಿಗೆ ಗ್ರಾಮ ಪಂಚಾಯತಿಗಳಿಂದ ಅರ್ಜಿಗಳನ್ನು ಸ್ವೀಕರಿಸುವ ಸಂದರ್ಭದಲ್ಲಿ ತಿರಸ್ಕೃತಗೊಂಡಿರುವ ಅರ್ಜಿಗಳ ಸಂಖ್ಯೆ ಹೆಚ್ಚಾಗಿರುವುದು ಕಂಡುಬಂದಿರುತ್ತದೆ.

ಆದುದರಿಂದ ತಮ್ಮ ಜಿಲ್ಲೆಯಲ್ಲಿ ಬಾಪೂಜಿ ಸೇವಾ ಕೇಂದ್ರದ ಹೆಚ್ಚಿನ ಬಳಕೆಗೆ ಪ್ರಾಮುಖ್ಯತೆ ನೀಡುವ ಸಲುವಾಗಿ ಈ ಕೆಳಕಂಡ ಕ್ರಮಕೈಗೊಳ್ಳುವುದು.

...2

- ಉಲ್ಲೇಖ(4) ರ ಪತ್ರದಲ್ಲಿ ಈಗಾಗಲೇ ತಿಳಿಸಿರುವಂತೆ ಜಿಲ್ಲೆಯ ಪ್ರಮುಖ ಸ್ಥಳಗಳಲ್ಲಿ ಬಾಪೂಜಿ ಸೇವಾ ಕೇಂದ್ರದ ಬಳಕೆಗಾಗಿ ಜಾಹೀರಾತು ಫಲಕ ಮತ್ತು ಪೋಸ್ಟರ್‌ಗಳನ್ನು ಅಳವಡಿಸುವುದು ಹಾಗೂ ಬಸ್ ನಿಲ್ದಾಣ, ರೈಲ್ವೇ ನಿಲ್ದಾಣಗಳಲ್ಲಿ ವ್ಯಾಪಕ ಪ್ರಚಾರ ಮಾಡಲು ಅಗತ್ಯ ಕ್ರಮವಹಿಸುವುದು.
- ಬಾಪೂಜಿ ಸೇವಾ ಕೇಂದ್ರಗಳ ಮೂಲಕ ಸಾರ್ವಜನಿಕರಿಗೆ ಅಗತ್ಯವಿರುವ ಸೇವೆಗಳನ್ನು ಆನ್‌ಲೈನ್ ಮುಖಾಂತರ ಒದಗಿಸುವುದು ಕಡ್ಡಾಯವಾಗಿದ್ದು ಈ ಬಗ್ಗೆ ಅಗತ್ಯ ಕ್ರಮವಹಿಸುವಂತೆ ಉಲ್ಲೇಖ(5) ರ ಪತ್ರದಲ್ಲಿ ತಿಳಿಸಲಾಗಿರುತ್ತದೆ. ಅದರಂತೆ ಗ್ರಾಮ ಪಂಚಾಯತಿಗಳಲ್ಲಿ ಗ್ರಾಅಪ ಇಲಾಖೆಗೆ ಸಂಬಂಧಪಟ್ಟ ಸೇವೆಗಳನ್ನು manual ಆಗಿ ಅಂದರೆ ತಂತ್ರಾಂಶದಲ್ಲಿ ಅಳವಡಿಸದೇ ನೀಡುವುದನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವುದು.

ಮೇಲ್ಕಂಡ ಅಂಶಗಳ ಬಗ್ಗೆ ಸಂಬಂಧಪಟ್ಟ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳು ಹಾಗೂ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ ಸಿಬ್ಬಂದಿಗಳಿಗೆ ಸೂಕ್ತ ನಿರ್ದೇಶನ ನೀಡಿ "ಪಂಚಾಯತ್ 100-ಬಾಪೂಜಿ ಸೇವಾ ಕೇಂದ್ರ" ಗಳ ಸಮರ್ಪಕ ಕಾರ್ಯನಿರ್ವಹಣೆಗೆ ಅಗತ್ಯ ಕ್ರಮವಹಿಸಲು ಕೋರಿದೆ.

ತಮ್ಮ ವಿಶ್ವಾಸಿ,

27/3/17

**(ಕೆ.ಯಾಲಕ್ಕಿಗೌಡ)**
ನಿರ್ದೇಶಕರು(ಇ-ಆಡಳಿತ) (ಪ್ರ) ಹಾಗೂ
ಪ/ನಿ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಧೀನ ಕಾರ್ಯದರ್ಶಿ(ಆಡಳಿತ) ರವರ ಆಪ್ತ ಶಾಖೆ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಅಪ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಅಪ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
4. ಜಿಲ್ಲಾಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲೆಗಳು – ಮಾಹಿತಿಗಾಗಿ ಹಾಗೂ ನಾಡ ಕಛೇರಿ ಸೇವೆಗಳ ಅರ್ಜಿಗಳು ಸಂಬಂಧಪಟ್ಟವರಿಂದ ತಿರಸ್ಕೃತಗೊಂಡಿದ್ದಲ್ಲಿ ಪರಿಶೀಲಿಸಿ ಸೂಕ್ತ ಕ್ರಮ ತೆಗೆದುಕೊಳ್ಳಲು ಕೋರಿದೆ.
5. ನಿರ್ದೇಶಕರು, ಪಂ.ರಾಜ್-1, ಗ್ರಾಅಪ, ಬೆಂಗಳೂರು.
6. ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳು.
7. ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳು (ತಾ.ಪಂ.ಗಳ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ).
8. ಜಿಲ್ಲಾ ಯೋಜನಾ ವ್ಯವಸ್ಥಾಪಕರು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.